# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 576 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 09/03/2026 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಖಾಸಗಿ ITIಗಳಲ್ಲಿ ತರಬೇತಿ ಪಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಹೆಚ್ಚಳದ ಬಗ್ಗೆ ಸರ್ಕಾರ ಕ್ರಮಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ಸರ್ಕಾರದ ಕ್ರಮಗಳೇನು;</td><td>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದ್ದು, ಸದರಿ ಕಾರ್ಯಕ್ರಮದಡಿ 2023-24 ನೇ ಸಾಲಿನಿಂದ ಐ.ಟಿ.ಐ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ. 5000/-ಗಳಂತೆ ವಿದ್ಯಾರ್ಥಿವೇತನ ದರಗಳನ್ನು ಹೆಚ್ಚಿಸಿ ಆದೇಶಿಸಲಾಗಿರುತ್ತದೆ. ಅದರಂತೆ ಕಳೆದ 2 ವರ್ಷಗಳಲ್ಲಿ ಐ.ಟಿ.ಐ ಕೋರ್ಸುಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಕೆಳಕಂಡಂತೆ ವಿದ್ಯಾರ್ಥಿವೇತನ ಪಾವತಿಸಲಾಗಿರುತ್ತದೆ.<br>(ರೂ.ಕೋಟಿಗಳಲ್ಲಿ)
<table>
<tr><th>ಆರ್ಥಿಕ ವರ್ಷ</th><th>ಪಾವತಿಯಾದ ವಿದ್ಯಾರ್ಥಿಗಳು</th><th>ಪಾವತಿ ಮಾಡಲಾದ ಮೊತ್ತ</th></tr>
<tr><td>2023-24</td><td>3638</td><td>1.81</td></tr>
<tr><td>2024-25</td><td>1794</td><td>0.89</td></tr>
</table></td></tr>
<tr><td>ಆ)</td><td>ಸರ್ಕಾರಿ ಮತ್ತು ಖಾಸಗಿ ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್.ಸಿ ಮತ್ತು ಎಸ್.ಟಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಪರಿಕರಗಳನ್ನು ಸಕಾಲದಲ್ಲಿ ಒದಗಿಸುತ್ತಿದೆಯೇ; ಒದಗಿಸಿದ್ದಲ್ಲಿ, ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; (ಮಾಹಿತಿ ನೀಡುವುದು)</td><td>ಸರ್ಕಾರಿ ಮತ್ತು ಖಾಸಗಿ ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್.ಸಿ ಮತ್ತು ಎಸ್.ಟಿ ತರಬೇತಿದಾರರಿಗೆ ಸಮಾಜ ಕಲ್ಯಾಣ ಇಲಾಖೆಯ ರಾಜ್ಯ ಅಭಿವೃದ್ಧಿ ಪರಿಷತ್ ಸಭೆಯ ವಾರ್ಷಿಕ ಕ್ರಿಯಾಯೋಜನೆಯ ಅನುಮೋದನೆಯಂತೆ ಹಾಗೂ ಅನುದಾನ ಲಭ್ಯತೆ ಅನುಸಾರ ಟೂಲ್‌ಕಿಟ್‌ಗಳನ್ನು ಖರೀದಿಸಿ ಉಚಿತವಾಗಿ ವಿತರಿಸಲಾಗುತ್ತಿದೆ.</td></tr>
<tr><td>ಇ)</td><td>ರಾಜ್ಯದಲ್ಲಿರುವ ಖಾಸಗಿ ಐಟಿಐಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಅಖಿಲ ಭಾರತ ವೃತ್ತಿ ಪರೀಕ್ಷೆಯ (AITT) ಪ್ರಾಯೋಗಿಕ ಪರೀಕ್ಷೆಯ ಪರೀಕ್ಷಾ ಶುಲ್ಕವನ್ನು Onlineನಲ್ಲಿ ಪಾವತಿಸಲು ಅವಕಾಶ ಕಲ್ಪಿಸುವ ಬಗ್ಗೆ ಸರ್ಕಾರ ಕ್ರಮಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು?</td><td>ಅಖಿಲ ಭಾರತ ವೃತ್ತಿ ಪರೀಕ್ಷೆಯ (AITT) ಪ್ರಾಯೋಗಿಕ ಪರೀಕ್ಷೆಯ ಪರೀಕ್ಷಾ ಶುಲ್ಕವನ್ನು ತರಬೇತಿದಾರರು ನೇರವಾಗಿ Online ನಲ್ಲಿ K2 ತಂತ್ರಾಂಶದಲ್ಲಿ ಚಲನ್ ಜನರೇಟ್ ಮಾಡಿ ಇಲಾಖೆಯ 2230-00-800-4-00-000 ಲೆಕ್ಕಶೀರ್ಷಿಕೆಗೆ Online ಮೂಲಕ ಪಾವತಿಸಿ ರಶೀದಿ ಪ್ರತಿಯನ್ನು ಪರೀಕ್ಷಾ ಅರ್ಜಿಯೊಂದಿಗೆ ಲಗತ್ತಿಸಲು ಅವಕಾಶವಿರುತ್ತದೆ.</td></tr>
</table>

**ಸಂಖ್ಯೆ: ಕೌಉಜೀಇ 08 ಕೈತಪ್ರ 2026**

(ಡಾ. ಶರಣಪ್ರಕಾಶ ಆರ್ ಪಾಟೀಲ)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.